# ಕರ್ನಾಟಕ ಸರ್ಕಾರ

## ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ: ಡಿಟಿಇ /ಇ.ಎಸ್.ಟಿ(7)/07/2025

ಆಯುಕ್ತರವರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560001.
ದಿನಾಂಕ: 13.03.2025.

ಇವರಿಗೆ,

1. ಪ್ರಾಂಶುಪಾಲರು,
   ಎಲ್ಲಾ ಸರ್ಕಾರಿ/ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳು
2. ಪ್ರಾಂಶುಪಾಲರು
   ಎಲ್ಲಾ ಸರ್ಕಾರಿ/ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳು
3. ಪ್ರಾಂಶುಪಾಲರು
   ಎಲ್ಲಾ ಸರ್ಕಾರಿ /ಅನುದಾನಿತ ಕಿರಿಯ ತಾಂತ್ರಿಕ ಶಾಲೆಗಳು

**ವಿಷಯ:** ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ. ಹೆಚ್.ಎನ್. ನಾಗಮೋಹನ್ ದಾಸ್ ಇವರ ಏಕ ಸದಸ್ಯ ವಿಚಾರಣಾ ಆಯೋಗಕ್ಕೆ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಡಿಯಲ್ಲಿನ ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ/ಸಿಬ್ಬಂದಿಗಳ, ಜಾತಿ/ ಉಪಜಾತಿಗಳ ವಿವರಗಳನ್ನು ಸಲ್ಲಿಸುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ರವರ ಪತ್ರ ಸಂಖ್ಯೆ ಇಡಿ 44 ವಿವಿಧ 2025 ದಿನಾಂಕ 27.02.2025.

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಡಿಯಲ್ಲಿನ ಸರ್ಕಾರಿ ಮತ್ತು ಅನುದಾನಿತ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ/ಸಿಬ್ಬಂದಿಗಳ, ಜಾತಿ/ ಉಪಜಾತಿಗಳ ವಿವರಗಳನ್ನು ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ. ಹೆಚ್.ಎನ್. ನಾಗಮೋಹನ್ ದಾಸ್ ಇವರ ಏಕ ಸದಸ್ಯ ವಿಚಾರಣಾ ಆಯೋಗಕ್ಕೆ ತುರ್ತಾಗಿ ಸಲ್ಲಿಸುವಂತೆ ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ಇವರು ಉಲ್ಲೇಖಿತ ಪತ್ರ ದಲ್ಲಿ ಆದೇಶಿಸಿರುತ್ತಾರೆ.

ಆದ್ದರಿಂದ, ತಾಂತ್ರಿಕ ಶಿಕ್ಷಣ ಇಲಾಖಾ ವ್ಯಾಪ್ತಿಯಡಿಯಲ್ಲಿನ ಸರ್ಕಾರಿ ಮತ್ತು ಅನುದಾನಿತ ತಾಂತ್ರಿಕ ಶಿಕ್ಷಣ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಲ್ಲಾ ವೃಂದದ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ/ಸಿಬ್ಬಂದಿಗಳ ಜಾತಿ/ ಉಪಜಾತಿಗಳ ವಿವರಗಳನ್ನು ಈ ಕೆಳಕಂಡ ಅನುಬಂಧದಲ್ಲಿರುವಂತೆ ವೃಂದವಾರು ಬೋಧಕ/ಬೋಧಕೇತರ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳ ಅಧಿಕಾರಿ/ಸಿಬ್ಬಂದಿಗಳ, ಜಾತಿ/ ಉಪಜಾತಿಗಳ ವಿವರಗಳನ್ನು google spreadsheet ನಲ್ಲಿ ಭರ್ತಿ ಮಾಡಿ ಸಲ್ಲಿಸುವುದು ಮತ್ತು ಕಛೇರಿ ಮುಖ್ಯಸ್ಥರಿಂದ ದೃಢೀಕರಿಸಲಾದ hard ಪ್ರತಿಯನ್ನು ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ ರವರಿಗೆ ದಿನಾಂಕ 15.03.2025 ರೊಳಗಾಗಿ ಸಲ್ಲಿಸುವಂತೆ ಸೂಚಿಸಲಾಗಿದೆ.

Scanned with CamScanner

| ಕ್ರ. ಸಂ | ಅನುಬಂಧ ಸಂಖ್ಯೆ | ವಿವರ |
|---|---|---|
| 1 | ಅನುಬಂಧ-1 | ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ, ಬೋಧಕ, ಬೋಧಕೇತರ ಮತ್ತು Workshop ಸಿಬ್ಬಂದಿಗಳ ವಿವರ. |
| 2 | ಅನುಬಂಧ-2 | ಸರ್ಕಾರಿ ಅನುದಾನಿತ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ, ಬೋಧಕ, ಬೋಧಕೇತರ ಮತ್ತು Workshop ಸಿಬ್ಬಂದಿಗಳ ವಿವರ. |
| 3 | ಅನುಬಂಧ-3 | ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ, ಬೋಧಕ, ಬೋಧಕೇತರ ಮತ್ತು Workshop ಸಿಬ್ಬಂದಿಗಳ ವಿವರ. |
| 4 | ಅನುಬಂಧ-4 | ಸರ್ಕಾರಿ ಅನುದಾನಿತ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ, ಬೋಧಕ, ಬೋಧಕೇತರ ಮತ್ತು Workshop ಸಿಬ್ಬಂದಿಗಳ ವಿವರ. |
| 5 | ಅನುಬಂಧ-5 | ಸರ್ಕಾರಿ ಕಿರಿಯ ತಾಂತ್ರಿಕ ಶಾಲೆಗಳಲ್ಲಿ ಮತ್ತು ಸರ್ಕಾರಿ ಲಲಿತ ಕಲಾ ವಿದ್ಯಾಲಯಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಕ್ಕೆ ಸೇರಿದ ಅಧಿಕಾರಿ, ಬೋಧಕ, ಬೋಧಕೇತರ ಮತ್ತು Workshop ಸಿಬ್ಬಂದಿಗಳ ವಿವರ. |

ಸದರಿ ಮಾಹಿತಿಯನ್ನು ಗೌರವಾನ್ವಿತ ನ್ಯಾಯಮೂರ್ತಿಗಳಾದ ಶ್ರೀ.ಹೆಚ್.ಎನ್.ನಾಗಮೋಹನ್ ದಾಸ್ ಇವರ ಏಕ ಸದಸ್ಯ ವಿಚಾರಣಾ ಆಯೋಗಕ್ಕೆ ಸಲ್ಲಿಸಬೇಕಾಗಿರುವುದರಿಂದ ವಿಷಯವನ್ನು ಅತ್ಯಂತ ಪ್ರಾಮುಖ್ಯವೆಂದು ಗಂಭೀರವಾಗಿ ಪರಿಗಣಿಸಿ, ಪರಿಶೀಲಿಸಿ, ನಿಖರವಾದ ಮಾಹಿತಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ಇಲ್ಲವಾದಲ್ಲಿ ಮುಂದೆ ಉದ್ಭವಿಸಬಹುದಾದ ಆಗು-ಹೋಗುಗಳಿಗೆ ನೀವೆ ನೇರವಾಗಿ ಜವಾಬ್ದಾರರಾಗಿರುತ್ತೀರೆಂದು ತಿಳಿಸಲಾಗಿದೆ.

ರವಾನಿಸಲಾಗಿದೆ
ಸಂ: 66
ದಿ: 13/03/...
ಸಹಿ: ...

Manjula
ಆಯುಕ್ತರು
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

**ಪ್ರತಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮಾಹಿತಿಗಾಗಿ ಸಲ್ಲಿಸಲಾಗಿದೆ.

O/C

Scanned with CamScanner